ಹಾಗೂ ಪ್ರತಿ ಜಿಲ್ಲೆಗೆ ಒಂದರಂತೆ 30 ತಾಲ್ಲೂಕು ಆಸ್ಪತ್ರೆಗಳಲ್ಲಿ ಜೆನರಿಕ್ ಔಷಧ ಮಳಿಗೆಯನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

ಜೆನರಿಕ್ ಔಷಧ ಮಳಿಗೆಯಲ್ಲಿ ಆಯುಷ್ ಔಷಧಿ ದೊರಕುವ ಸೌಲಭ್ಯವನ್ನು ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಇ) ಈ ವರ್ಷದ ಅಂತ್ಯದೊಳಗೆ ಜೆನರಿಕ್ ಔಷಧಿ ಮಳಿಗೆಗಳನ್ನು ಪ್ರಾರಂಭಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ.

ಆಸ್ಪತ್ರೆಗಳ ಸ್ಥಾಪನೆ

199(301); ಶ್ರೀ ಮಲ್ಲಿಕಾರ್ಜುನ ಸಿದ್ದಾಮಪ್ಪ ಖೂಬಾ (ಬಸವ ಕಲ್ಯಾಣ)

ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶದ ವಿವಿಧ ಜಿಲ್ಲೆಗಳಲ್ಲಿ ಬರುವ ಆಸ್ಪತ್ರೆಗಳು ಮತ್ತು ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು?

ಆ) ಈ ಭಾಗದ ಜಿಲ್ಲೆಗಳ ಜನಸಂಖ್ಯೆಗೆ ಅನುಗುಣವಾಗಿ ಇನ್ನೂ ಎಷ್ಟು ಆಸ್ಪತ್ರೆಗಳು ಮತ್ತು ಆರೋಗ್ಯ ಕೇಂದ್ರಗಳ ಅವಶ್ಯಕತೆ (ವಿವರ ಒದಗಿಸುವುದು)

ಇ) ಪ್ರಸಕ್ತ ಸಾಲಿನಲ್ಲಿ ಈ ಭಾಗದ ಜಿಲ್ಲೆಗಳಲ್ಲಿ ಹೊಸದಾಗಿ ಎಲ್ಲೆಲ್ಲಿ ಆಸ್ಪತ್ರೆಗಳನ್ನು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲಾಗುವುದು?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 6 ಜಿಲ್ಲಾ ಆಸ್ಪತ್ರೆಗಳು, 25 ತಾಲ್ಲೂಕು ಮಟ್ಟದ ಸಾರ್ವಜನಿಕ ಆಸ್ಪತ್ರೆಗಳು, 51 ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು 316 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ.

ಜಿಲ್ಲಾವಾರು ವಿವರ ಈ ಕೆಳಕಂಡಂತಿರುತ್ತವೆ:

ಕ್ರ.ಸಂ.	ಜಿಲ್ಲೆಗಳ ಹೆಸರು	ಪ್ರಾ.ಆ.ಕೇಂದ್ರ	ಸ.ಆ.ಕೇ.	ತಾಲ್ಲೂಕು ಮಟ್ಟದ ಆಸ್ಪತ್ರೆಗಳು	ಜಿಲ್ಲಾ ಆಸ್ಪತ್ರೆ
1	ಯಾದಗಿರಿ	42	6	2	1
2	ಕೊಪ್ಪಳ	42	9	3	1
3	ಗುಲಬರ್ಗಾ	83	16	6	1
4	ಬಳ್ಳಾರಿ	50	11	6	1
5	ಬೀದರ್	51	8	4	1
6	ರಾಯಚೂರು	48	6	4	1

ಆ) ಈ ಭಾಗದ ಜನ ಸಂಖ್ಯೆಗೆ ಅನುಗುಣವಾಗಿ ಇರಬೇಕಾದ ಆಸ್ಪತ್ರೆಗಳ ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ.

ಇ) ರಾಜ್ಯದಲ್ಲಿ ಅವಶ್ಯಕತೆಗಿಂತ ಹೆಚ್ಚುವರಿಯಾಗಿ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿದ್ದು, ಹೊಸದಾಗಿ ಮಂಜೂರು ಮಾಡಲ್ಪಟ್ಟ/ ಮೇಲ್ದರ್ಜೆಗೇರಿಸಲ್ಪಟ್ಟ ಆಸ್ಪತ್ರೆಗಳ ಹಾಸಿಗೆ ಸಾಮರ್ಥ್ಯಕ್ಕೆ ಅನುಗುಣವಾಗಿ ಅವಶ್ಯವಿರುವ ಔಷಧಿಗಳನ್ನು ಪೂರೈಸಲಾಗುತ್ತಿದ್ದು, ಅವುಗಳಿಗೆ ಖಾಯಂ ಕಟ್ಟಡಗಳನ್ನು ಮತ್ತು ವೈದ್ಯರು/ಸಿಬ್ಬಂದಿಯನ್ನು ನಿಗದಿತ ಮಟ್ಟಕ್ಕೆ ಒದಗಿಸಲಾಗಿಲ್ಲ. ಅಲ್ಲದೇ ಈಗಾಗಲೇ ಸ್ಥಾಪಿಸಿರುವ ಸಮುದಾಯ ಆರೋಗ್ಯ ಕೇಂದ್ರ ಮತ್ತು ಮೇಲ್ಪಟ್ಟ ಆಸ್ಪತ್ರೆಗಳಿಗೆ ತಜ್ಞ ವೈದ್ಯರ ತೀವ್ರ ಕೊರತೆಯಿರುವುದರಿಂದ, ಈ ಕೊರತೆ ನಿವಾರಿಸಲು ಪ್ರಥಮಾದ್ಯತೆ ನೀಡಿ, ತದನಂತರ ಹೊಸ ಆಸ್ಪತ್ರೆ ಮಂಜೂರಾತಿಗೆ ಕ್ರಮವಹಿಸಲಾಗುವುದು

ಪ್ರಶ್ನೆ ಸಂಖ್ಯೆ:301 ಕ್ಕೆ ಅನುಬಂಧ

ಭಾರತ ಸರ್ಕಾರದ ಮಾರ್ಗಸೂಚಿಯಂತೆ ರಾಜ್ಯ ಸರ್ಕಾರವು ಆರೋಗ್ಯ ಸೌಲಭ್ಯಗಳನ್ನು ಮೂರು ಹಂತದಲ್ಲಿ ಅಂದರೆ, ಉಪಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳ ಮೂಲಕ ಆರೋಗ್ಯ ಸೇವೆಯನ್ನು ಒದಗಿಸಬೇಕಾಗಿರುತ್ತದೆ. ಆ ಪ್ರಕಾರ, ಸಮತಟ್ಟು ಪ್ರದೇಶಗಳಲ್ಲಿ 30,000 ಜನಸಂಖ್ಯೆ ಹಾಗೂ ಗುಡ್ಡ ಗಾಡು ಹಾಗೂ ಗಿರಿಜನ ಪ್ರದೇಶಗಳಲ್ಲಿ 20,000 ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲು ಅನುಸೂಚಿಗಳಲ್ಲಿ ಅವಕಾಶವಿದೆ ಮತ್ತು ಸಮತಟ್ಟು ಪ್ರದೇಶಗಳಲ್ಲಿ 1,20,000 ಜನಸಂಖ್ಯೆಗೆ ಒಂದರಂತೆ ಒಂದು ಸಮುದಾಯ ಆರೋಗ್ಯ ಕೇಂದ್ರವನ್ನು ಗುಡ್ಡಗಾಡು ಮತ್ತು ಗಿರಿಜನಪ್ರದೇಶದಲ್ಲಿ 80000 ಮತ್ತು 100000 ಜನಸಂಖ್ಯೆಗೆ ಒಂದು ಸಮುದಾಯ ಆರೋಗ್ಯ ಕೇಂದ್ರದಂತೆ ಮಂಜೂರು ಮಾಡಲು ಮಾರ್ಗಸೂಚಿಗಳಲ್ಲಿ ಅವಕಾಶವಿದೆ.

ಯಾದಗಿರಿ ಜಿಲ್ಲೆ:– ಈ ಜಿಲ್ಲೆಯ 2011ರ ಗ್ರಾಮೀಣ ಜನಸಂಖ್ಯೆ 953594 ಇದ್ದು 32 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶವಿದ್ದು, ಹಾಲಿ 42 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು 10 ಹೆಚ್ಚುವರಿಯಾಗಿರುತ್ತದೆ. ಅಲ್ಲದೇ 8 ಸಮುದಾಯ ಆರೋಗ್ಯ ಕೇಂದ್ರಕ್ಕೆ ಅವಕಾಶವಿದ್ದು ಹಾಲಿ 6 ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

ಕೊಪ್ಪಳ ಜಿಲ್ಲೆ:– ಈ ಜಿಲ್ಲೆಯ 2011ರ ಗ್ರಾಮೀಣ ಜನಸಂಖ್ಯೆ 1156216 ಇದ್ದು 39 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶವಿದ್ದು, ಹಾಲಿ 42 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು 3 ಹೆಚ್ಚುವರಿಯಾಗಿರುತ್ತದೆ. ಅಲ್ಲದೇ 10 ಸಮುದಾಯ ಆರೋಗ್ಯ ಕೇಂದ್ರಕ್ಕೆ ಅವಕಾಶವಿದ್ದು ಹಾಲಿ 9 ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ.

ಗುಲಬರ್ಗಾ ಜಿಲ್ಲೆ:– ಈ ಜಿಲ್ಲೆಯ 2011ರ ಗ್ರಾಮೀಣ ಜನಸಂಖ್ಯೆ 1730775 ಇದ್ದು 58 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶವಿದ್ದು, ಹಾಲಿ 83 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು 25 ಹೆಚ್ಚುವರಿಯಾಗಿರುತ್ತದೆ. ಅಲ್ಲದೇ 15 ಸಮುದಾಯ ಆರೋಗ್ಯ ಕೇಂದ್ರಕ್ಕೆ ಅವಕಾಶವಿದ್ದು ಹಾಲಿ 16 ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ.

ಬಳ್ಳಾರಿ ಜಿಲ್ಲೆ:– ಈ ಜಿಲ್ಲೆಯ 2011ರ ಗ್ರಾಮೀಣ ಜನಸಂಖ್ಯೆ 1532356 ಇದ್ದು 51 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶವಿದ್ದು, ಹಾಲಿ 50 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು 1 ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಅವಕಾಶವಿರುತ್ತದೆ. ಅಲ್ಲದೇ 13 ಸಮುದಾಯ ಆರೋಗ್ಯ ಕೇಂದ್ರಕ್ಕೆ ಅವಕಾಶವಿದ್ದು ಹಾಲಿ 11 ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ.

ಬೀದರ್ ಜಿಲ್ಲೆ:– ಈ ಜಿಲ್ಲೆಯ 2011ರ ಗ್ರಾಮೀಣ ಜನಸಂಖ್ಯೆ 1277348 ಇದ್ದು 42 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶವಿದ್ದು, ಹಾಲಿ 51 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು 9 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹೆಚ್ಚುವರಿಯಾಗಿ ಕಾರ್ಯನಿರ್ವಹಿಸುತ್ತಿದೆ. ಅಲ್ಲದೇ 10 ಸಮುದಾಯ ಆರೋಗ್ಯ ಕೇಂದ್ರಕ್ಕೆ ಅವಕಾಶವಿದ್ದು ಹಾಲಿ 8 ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ.

ರಾಯಚೂರು ಜಿಲ್ಲೆ:– ಈ ಜಿಲ್ಲೆಯ 2011ರ ಗ್ರಾಮೀಣ ಜನಸಂಖ್ಯೆ 1438464 ಇದ್ದು 48 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶವಿದ್ದು, ಹಾಲಿ 48 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ, ಅಲ್ಲದೇ 12 ಸಮುದಾಯ ಆರೋಗ್ಯ ಕೇಂದ್ರಕ್ಕೆ

ಅವಕಾಶವಿದ್ದು ಹಾಲಿ 6 ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ.

ವಿದ್ಯಾರ್ಥಿ ನಿಲಯಗಳಿಗೆ ಮೂಲಭೂತ ಸೌಲಭ್ಯಗಳು

200(302); ಶ್ರೀ ಮಲ್ಲಿಕಾರ್ಜುನ ಸಿದ್ದಾಮಪ್ಪ ಖೂಬಾ (ಬಸವಕಲ್ಯಾಣ)

ಅ) ಹೈದ್ರಾಬಾದ್–ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳಲ್ಲಿ ಇರುವ ವಿವಿಧ ವರ್ಗದ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಇವುಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

ಆ) ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಈ ವಿದ್ಯಾರ್ಥಿ ನಿಲಯಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರದ ಮುಂದಿರುವ ಕ್ರಮಗಳೇನು

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಹೈದರಾಬಾದ್–ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳಲ್ಲಿ ಇರುವ ವಿವಿಧ ವರ್ಗದ ವಿದ್ಯಾರ್ಥಿ ನಿಲಯಗಳು ಹಾಗೂ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆಯ ವಿವರಗಳು ಈ ಕೆಳಕಂಡಂತಿದೆ:

ಕ್ರ.ಸಂ.	ವಿವಿಧ ವರ್ಗಗಳು	ವಿದ್ಯಾರ್ಥಿ ನಿಲಯಗಳ ಸಂಖ್ಯೆ	ಇವುಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ
1	ಸಮಾಜ ಕಲ್ಯಾಣ ಇಲಾಖೆ	386	31486
2	ಪರಿಶಿಷ್ಟ ಪಂಗಡಗಳ ಕಲ್ಯಾಣ ನಿರ್ದೇಶನಾಲಯ	67	4261
3	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ	455	31707